# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 852 |
| 2. | ಮಾನ್ಯ ಸದಸ್ಯರ ಹೆಸರು | : | ಶ್ರೀ ಬಸನಗೌಡ ಬಾದರ್ಲಿ<br>(ವಿಧಾನ ಸಭಾ ಕ್ಷೇತ್ರದಿಂದ ಚುನಾಯಿತರಾದವರು) |
| 3. | ಉತ್ತರಿಸಬೇಕಾದ ದಿನಾಂಕ | : | 19.08.2025 |
| 4. | ಉತ್ತರಿಸುವ ಸಚಿವರು | : | ಮಾನ್ಯ ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು. |

*****

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸಿಂಧನೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ಬರುವ ಕೃಷಿ ಮಾರುಕಟ್ಟೆಗೆ ಕಳೆದ 2023-24ನೇ ಸಾಲಿನಿಂದ ಇಲ್ಲಿಯವರೆಗೆ ಸರ್ಕಾರದಿಂದ ಬಿಡುಗಡೆಯಾದ ಅನುದಾನ ಎಷ್ಟು; | ಸಿಂಧನೂರು ವಿಧಾನಸಭಾ ಕ್ಷೇತ್ರ ವ್ಯಾಪ್ತಿಗೆ ಬರುವ ಸಿಂಧನೂರು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗೆ ಕಳೆದ 2023-24ನೇ ಸಾಲಿನಿಂದ ಇಲ್ಲಿಯವರೆಗೆ RIDF-29ರ ಯೋಜನೆಯಡಿ ತುರ್ವಿಹಾಳ ಉಪ ಮಾರುಕಟ್ಟೆ ಪ್ರಾಂಗಣದಲ್ಲಿ ಸಿ.ಸಿ.ರಸ್ತೆ, ಆರ್.ಸಿ.ಸಿ ಚರಂಡಿ, ಶೌಚಾಲಯ ಕಟ್ಟಡ ಮತ್ತು ಆಂತರಿಕ ವಿದ್ಯುದೀಕರಣ ಕಾಮಗಾರಿಯನ್ನು ರೂ. 250.00 ಲಕ್ಷಗಳಲ್ಲಿ ಕೈಗೊಳ್ಳಲು ಅನುಮೋದನೆಯಾಗಿದ್ದು, ಕಾಮಗಾರಿ ಪ್ರಗತಿಯಲ್ಲಿರುತ್ತದೆ.<br><br>ಸದರಿ ಕಾಮಗಾರಿಗೆ ಇಲ್ಲಿಯವರೆಗೆ ಸರ್ಕಾರದಿಂದ ರೂ. 80.00 ಲಕ್ಷಗಳ ಅನುದಾನ ಬಿಡುಗಡೆಯಾಗಿರುತ್ತದೆ. |
| ಆ) | ಯಾವ ಯಾವ ಯೋಜನೆಗಳಿಗೆ ಅನುದಾನ ಬಳಕೆಯಾಗಿದೆ ಸಂಪೂರ್ಣ ಮಾಹಿತಿ ನೀಡುವುದು; | |
| ಇ) | ಸಿಂಧನೂರಲ್ಲಿ ಕೃಷಿ ಮಾರುಕಟ್ಟೆಗೆ ಸಂಬಂಧಿಸಿದ ಜಾಗ ಎಷ್ಟಿದೆ; | ಸಿಂಧನೂರು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗೆ ಸಂಬಂಧಿಸಿದ ಜಾಗದ ವಿವರ ಈ ಕೆಳಕಂಡಂತಿದೆ:- |

| | | |
|---|---|---|
| 3 | ಮುಖ್ಯ ಹಾಗೂ ವಿಸ್ತೃತ ಮಾರುಕಟ್ಟೆ ಪ್ರಾಂಗಣ. | 58.19 ಎಕರೆ |
| 2 | ತುರ್ವಿಹಾಳ ಉಪ ಮಾರುಕಟ್ಟೆ ಪ್ರಾಂಗಣ. | 10.00 ಎಕರೆ |
| 3 | ಹಣ್ಣು ಮತ್ತು ತರಕಾರಿ ಉಪ ಪ್ರಾಂಗಣ. | 2.00 ಎಕರೆ |
| 4 | ಪಂಪ್ ಹೌಸ್ ಜಾಗ | 1.00 ಎಕರೆ |
| | **ಒಟ್ಟು** | **71.19ಎಕರೆ** |

| | | |
|---|---|---|
| ಈ) | ಕಳೆದ 15 ವರ್ಷಗಳಿಂದ ಕೃಷಿ ಮಾರುಕಟ್ಟೆಗೆ ಸಂಬಂಧಿಸಿದ ಜಾಗ ಎಷ್ಟು ಹಂಚಿಕೆಯಾಗಿದೆ ಯಾವ ಆಧಾರದ ಮೇಲೆ ಹಂಚಿಕೆಯಾಗಿದೆ ಹಾಗೂ ಇನ್ನು ಎಷ್ಟು ಜಾಗ ಉಳಿದಿದೆ; (ಸಂಪೂರ್ಣ ಮಾಹಿತಿ ನೀಡುವುದು) | ಸಿಂಧನೂರು ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಮುಖ್ಯ ಮತ್ತು ವಿಸ್ತೃತ ಮಾರುಕಟ್ಟೆ ಪ್ರಾಂಗಣದಲ್ಲಿ ಒಟ್ಟು 87 ವಿವಿಧ ಮಾದರಿಯ ನಿವೇಶನಗಳನ್ನು ರಚಿಸಿ, ಸಮಿತಿಯಿಂದ ಲೈಸೆನ್ಸ್ ಪಡೆದು ವ್ಯಾಪಾರ ವಹಿವಾಟು ನಡೆಸುವ ವರ್ತಕರುಗಳಿಗೆ ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ಮಾರುಕಟ್ಟೆ ಪ್ರಾಂಗಣದಲ್ಲಿನ ಸ್ವತ್ತಿನ ಹಂಚಿಕೆ ನಿಯಂತ್ರಣ) ನಿಯಮಗಳು 2004ರನ್ವಯ ಲೀಸ್ ಕಂ ಸೇಲ್ ಆಧಾರದ ಮೇಲೆ ಹಂಚಿಕೆ ಮಾಡಲಾಗಿದೆ.<br><br>ಭವಿಷ್ಯದ ಅಭಿವೃದ್ಧಿ ಯೋಜನೆಗಾಗಿ 946.00 ಚ.ಮೀ ಜಾಗವನ್ನು ಕಾಯ್ದಿರಿಸಲಾಗಿದೆ. |

**ಸಂಖ್ಯೆ: ಸಿಒ 194 ಎಂಆರ್‌ಇ 2025**

(ಶಿವಾನಂದ ಎಸ್. ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರ ಹಾಗೂ
ಕೃಷಿ ಮಾರುಕಟ್ಟೆ ಸಚಿವರು